# Akashvani: Bangalore
# National Bulletin In Kannada
# 23.10.2025 : 13.10hrs
# ಆಕಾಶವಾಣಿ, ಬೆಂಗಳೂರು
# ರಾಷ್ಟ್ರೀಯ ವಾರ್ತೆಗಳು

**ಮುಖ್ಯಾಂಶಗಳು**

1. ಪಹಲ್ಗಾಮ್ ದಾಳಿಯ ಮೂಲಕ ಭಯೋತ್ಪಾದನಾ ಚಟುವಟಿಕೆಗಳಿಗೆ ಪಾಕಿಸ್ತಾನದ ಪ್ರಾಯೋಜಕತ್ವ ಜಗಜ್ಜಾಹೀರಾಗಿದೆ - ಭಾರತ
2. ವಿಕಸಿತ ಭಾರತದ ದೃಷ್ಟಿಕೋನ ಸಾಧಿಸಲು ಸಮಾಜದ ಪ್ರತಿಯೊಂದು ವರ್ಗಕ್ಕೂ ಸಮಾನ ಅವಕಾಶಗಳು ಅಗತ್ಯ - ರಾಷ್ಟ್ರಪತಿ ದ್ರೌಪದಿ ಮುರ್ಮು ಪ್ರತಿಪಾದನೆ
3. ಪಶ್ಚಿಮ ಬಂಗಾಳದಲ್ಲಿ ನಿರ್ದೇಶನ ಪಾಲಿಸದ ಸಾವಿರಕ್ಕೂ ಹೆಚ್ಚು ಬೂತ್ ಮಟ್ಟದ ಅಧಿಕಾರಿಗಳಿಗೆ ಶೋಕಾಸ್ ನೋಟಿಸ್ ಜಾರಿ ಮಾಡಿದ ಚುನಾವಣಾ ಆಯೋಗ
4. ಏಕದಿನ ಕ್ರಿಕೆಟ್: ಆಸ್ಟ್ರೇಲಿಯಾ ತಂಡಕ್ಕೆ ೨೬೫ ರನ್‌ಗಳ ಗುರಿ ನೀಡಿದ ಭಾರತ
5. ಐಸಿಸಿ ಮಹಿಳಾ ವಿಶ್ವಕಪ್ ಕ್ರಿಕೆಟ್: ನಿರ್ಣಾಯಕ ಪಂದ್ಯದಲ್ಲಿಂದು ಭಾರತ-ನ್ಯೂಜಿಲೆಂಡ್ ಮುಖಾಮುಖಿ

**********

ಪಾಕಿಸ್ತಾನ ಬೆಂಬಲಿತ ಪಹಲ್ಗಾಮ್ ದಾಳಿಯು, ವಿಶ್ವದ ಸ್ಮೃತಿಪಟಲದಲ್ಲಿ ಇನ್ನೂ ಹಸಿರಾಗಿದೆ. ಭಯೋತ್ಪಾದನಾ ಚಟುವಟಿಕೆಗಳಿಗೆ ಪ್ರಾಯೋಜಕತ್ವ ನೀಡುವ ಪಾಕಿಸ್ತಾನ, ಮಾನವ ಹಕ್ಕುಗಳ ನಿರಂತರ ಉಲ್ಲಂಘನೆ ಮಾಡುವ ದೇಶವಾಗಿದೆ ಎಂಬುದು ಜಗತ್ತಿನ ಮುಂದೆ ಬಹಿರಂಗಗೊಂಡಿದೆ ಎಂದು ಭಾರತ ಹೇಳಿದೆ. ವಿಶ್ವಸಂಸ್ಥೆಯ ಸಾಮಾನ್ಯ ಸಭೆಯಲ್ಲಿ ಮಾತನಾಡಿದ ವಿಶ್ವಸಂಸ್ಥೆಯಲ್ಲಿನ ಭಾರತದ ಕಾರ್ಯದರ್ಶಿ ರಘು ಪುರಿ, ಗಡಿಯಾಚೆಗಿನ ಭಯೋತ್ಪಾದನೆಗೆ ಪಾಕಿಸ್ತಾನ ಪ್ರಾಯೋಜಕತ್ವ ನೀಡುತ್ತಿದೆ. ಪಾಕಿಸ್ತಾನ, ಭಯೋತ್ಪಾದನೆಯನ್ನು ಭಾರತದ ವಿರುದ್ಧ ದಾಳವಾಗಿ ಬಳಸುತ್ತಿರುವುದಕ್ಕೆ ಅಂತಾರಾಷ್ಟ್ರೀಯ ಸಮುದಾಯ ಸಾಕ್ಷಿಯಾಗಿದೆ ಎಂದು ದೂರಿದರು. ಪಾಕಿಸ್ತಾನದಲ್ಲಿನ ಭಯೋತ್ಪಾದಕ ನೆಲೆಗಳ ವಿರುದ್ಧ ಭಾರತ ಈ ವರ್ಷ ಮೇ ತಿಂಗಳಲ್ಲಿ ಪ್ರಾರಂಭಿಸಿದ ಆಪರೇಷನ್ ಸಿಂದೂರ ಕಾರ್ಯಾಚರಣೆಯನ್ನು ಇದೇ ವೇಳೆ ಅವರು ಸಮರ್ಥಿಸಿಕೊಂಡರು.

**********

ವಿಕಸಿತ ಭಾರತದ ದೃಷ್ಟಿಕೋನವನ್ನು ಸಾಧಿಸಲು ಸಮಾಜದ ಪ್ರತಿಯೊಂದು ವರ್ಗಕ್ಕೂ, ವಿಶೇಷವಾಗಿ ದುರ್ಬಲ ವರ್ಗಕ್ಕೆ ಸಮಾನ ಅವಕಾಶಗಳು ಅಗತ್ಯ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಪ್ರತಿಪಾದಿಸಿದ್ದಾರೆ. ಕೇರಳದ ರಾಜಭವನದಲ್ಲಿ ಇಂದು ಮಾಜಿ ರಾಷ್ಟ್ರಪತಿ ಕೆ.ಆರ್.ನಾರಾಯಣನ್ ಅವರ ಪ್ರತಿಮೆಯನ್ನು ಅನಾವರಣಗೊಳಿಸಿದ ನಂತರ ಅವರು ಸಭೆಯನ್ನುದ್ದೇಶಿಸಿ ಮಾತನಾಡಿದರು. ಮಾಜಿ ರಾಷ್ಟ್ರಪತಿ ಕೆ.ಆರ್.ನಾರಾಯಣನ್ ಅವರು ಸಮಗ್ರತೆ, ಕರುಣೆ ಮತ್ತು ಉನ್ನತ ಪ್ರಜಾಪ್ರಭುತ್ವ ಮನೋಭಾವದ ಪರಂಪರೆಯನ್ನು ಬಿಟ್ಟು ಹೋಗಿದ್ದಾರೆ. ನಾರಾಯಣನ್ ಅವರು ತಮ್ಮ ಜೀವನವನ್ನು ರಾಷ್ಟ್ರ ನಿರ್ಮಾಣ ಮತ್ತು ಸಮಗ್ರ ದೇಶವನ್ನು ರೂಪಿಸಲು ಮುಡಿಪಾಗಿಟ್ಟರು ಎಂದು ಅವರು ಹೇಳಿದರು. ಈ ಸಂದರ್ಭದಲ್ಲಿ ಕೇರಳ ರಾಜ್ಯಪಾಲ ರಾಜೇಂದ್ರ ವಿಶ್ವನಾಥ್ ಅರ್ಲೇಕರ್, ಮಾಜಿ ರಾಷ್ಟ್ರಪತಿ ರಾಮ್‌ನಾಥ್ ಕೋವಿಂದ್, ಬಿಹಾರ ರಾಜ್ಯಪಾಲ ಆರಿಫ್ ಮುಹಮ್ಮದ್ ಖಾನ್ ಉಪಸ್ಥಿತರಿದ್ದರು.

**********

ಪಶ್ಚಿಮ ಬಂಗಾಳದಲ್ಲಿ ಚುನಾವಣಾ ಆಯೋಗದ ನಿರ್ದೇಶನಗಳನ್ನು ಪಾಲಿಸದ ಸಾವಿರಕ್ಕೂ ಹೆಚ್ಚು ಬೂತ್ ಮಟ್ಟದ ಅಧಿಕಾರಿಗಳಿಗೆ ಚುನಾವಣಾ ಆಯೋಗ ಶೋಕಾಸ್ ನೋಟಿಸ್ ಜಾರಿ ಮಾಡಿದೆ. ಆಯೋಗದ ಮೂಲಗಳ ಪ್ರಕಾರ, ಈ ವರ್ಷದ ಏಪ್ರಿಲ್‌ನಲ್ಲಿ ರಾಜ್ಯದಲ್ಲಿ ಬೂತ್ ಮಟ್ಟದ ಅಧಿಕಾರಿಗಳ ನೇಮಕಾತಿ ಪ್ರಕ್ರಿಯೆಯು ಪ್ರಾರಂಭವಾಗಿದೆ. ಆದರೆ ಅಕ್ಟೋಬರ್ ೧೭ ರವರೆಗೆ ಸಾವಿರಕ್ಕೂ ಹೆಚ್ಚು ಬೂತ್ ಮಟ್ಟದ ಅಧಿಕಾರಿಗಳು ತಮ್ಮ ಜವಾಬ್ದಾರಿಯನ್ನು ವಹಿಸಿಕೊಳ್ಳಲು ವಿಫಲರಾಗಿದ್ದಾರೆ. ಆಯೋಗದ ನಿರ್ದೇಶನಗಳನ್ನು ಉಲ್ಲಂಘಿಸಿದ್ದಕ್ಕಾಗಿ ವಿವರಣೆಯನ್ನು ಕೋರಿ, ಅವರಿಗೆ ಈಗ ಶೋಕಾಸ್ ನೋಟಿಸ್ ನೀಡಲಾಗಿದೆ. ನೋಟಿಸ್‌ಗಳಿಗೆ ಪ್ರತಿಕ್ರಿಯೆಗಳು ಅತೃಪ್ತಿಕರವಾಗಿದ್ದರೆ, ೧೯೫೦ ರ ಜನತಾ ಪ್ರಾತಿನಿಧ್ಯ ಕಾಯ್ದೆಯಡಿಯಲ್ಲಿ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಚುನಾವಣಾ ಆಯೋಗ ಸ್ಪಷ್ಟಪಡಿಸಿದೆ. ಶೀಘ್ರದಲ್ಲೇ, ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ ಪ್ರಕ್ರಿಯೆಯು ದೇಶಾದ್ಯಂತ ಪ್ರಾರಂಭವಾಗುವ ನಿರೀಕ್ಷೆಯಿದೆ. ಪಶ್ಚಿಮ ಬಂಗಾಳದಲ್ಲಿನ ಪ್ರಸ್ತುತ ಪರಿಸ್ಥಿತಿಯನ್ನು ಗಮನದಲ್ಲಿಟ್ಟುಕೊಂಡು, ಆಯೋಗ, ರಾಜ್ಯದ ಚುನಾವಣಾ ಪ್ರಕ್ರಿಯೆಯನ್ನು ತೀವ್ರವಾಗಿ ಮತ್ತು ಕಟ್ಟುನಿಟ್ಟಾಗಿ ಮೇಲ್ವಿಚಾರಣೆ ಮಾಡುತ್ತಿದೆ.

**********

ಪ್ರಧಾನಿ ನರೇಂದ್ರ ಮೋದಿ ಅವರು ಆಸಿಯಾನ್ ಶೃಂಗಸಭೆಯಲ್ಲಿ ವರ್ಚುವಲ್ ಆಗಿ ಭಾಗವಹಿಸುವುದಾಗಿ ಹೇಳಿದ್ದಾರೆ. ಮಲೇಷ್ಯಾ ಪ್ರಧಾನಿ ಅನ್ವರ್ ಇಬ್ರಾಹಿಂ ಅವರೊಂದಿಗೆ ಸಂಭಾಷಣೆ ನಡೆಸಿದ ಪ್ರಧಾನಿ ಮೋದಿ ಅವರು, ಆಸಿಯಾನ್ ಅಧ್ಯಕ್ಷತೆಯನ್ನು ಮಲೇಷ್ಯಾ ವಹಿಸಿಕೊಂಡಿದ್ದಕ್ಕಾಗಿ ಅವರನ್ನು ಅಭಿನಂದಿಸಿದ್ದಾರೆ.ಆಸಿಯಾನ್-ಭಾರತ ಸಮಗ್ರ ಕಾರ್ಯತಂತ್ರದ ಪಾಲುದಾರಿಕೆಯನ್ನು ಮತ್ತಷ್ಟು ಗಾಢವಾಗಿಸಲು ತಮ್ಮ ಬದ್ಧತೆಯನ್ನು ಪ್ರಧಾನಿ ಮೋದಿ ಪುನರುಚ್ಚರಿಸಿದರು. ೪೭ ನೇ ಆಸಿಯಾನ್ ಶೃಂಗಸಭೆಯು ಇದೇ ೨೬ ರಿಂದ ೨೮ ರವರೆಗೆ ಮಲೇಷ್ಯಾದ ಕೌಲಾಲಂಪುರದಲ್ಲಿ ನಡೆಯಲಿದೆ.

**********

ಪ್ರಧಾನಿ ನರೇಂದ್ರ ಮೋದಿ ಅವರು ಇಂದು ಸಂಜೆ ೬ ಗಂಟೆಗೆ 'ಮೇರಾ ಬೂತ್ ಸಬ್ಸೆ ಮಜ್ಬೂತ್' ಕಾರ್ಯಕ್ರಮದಡಿಯಲ್ಲಿ ಬಿಜೆಪಿ-ಎನ್‌ಡಿಎ ಕಾರ್ಯಕರ್ತರೊಂದಿಗೆ ವರ್ಚುವಲ್ ಸಂವಾದದಲ್ಲಿ ತೊಡಗಿಸಿಕೊಳ್ಳಲಿದ್ದಾರೆ. ಬಿಹಾರ ವಿಧಾನಸಭಾ ಚುನಾವಣೆಯಲ್ಲಿ ಬಿಜೆಪಿ-ಎನ್‌ಡಿಎ ಗೆಲುವು ಸಾಧಿಸಲು ಕಾರ್ಯಕರ್ತರು ಅಭೂತಪೂರ್ವ ಶಕ್ತಿ ಮತ್ತು ಸಮರ್ಪಣೆಯೊಂದಿಗೆ ಕ್ಷೇತ್ರದಲ್ಲಿ ದೃಢನಿಶ್ಚಯದಿಂದ ಕೆಲಸ ಮಾಡಲಿದ್ದಾರೆ ಎಂದು ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಪ್ರಧಾನಿ ಮೋದಿ ಆಶಿಸಿದ್ದಾರೆ.ಸಾರ್ವಜನಿಕ ಸಂಪರ್ಕ ಮತ್ತು ಸಂವಾದದಿಂದ ಹಿಡಿದು ಸಂಘಟನೆಯ ಪ್ರತಿಯೊಂದು ಹಂತದಲ್ಲೂ ಕಾರ್ಯಕರ್ತರ ಭಾಗವಹಿಸುವಿಕೆ ಎನ್‌ಡಿಎ ಕೂಟದ ದೊಡ್ಡ ಶಕ್ತಿಯಾಗಿದೆ ಎಂದು ಅವರು ಹೇಳಿದರು.

**********

ಚಳಿಗಾಲದ ಹಿನ್ನೆಲೆಯಲ್ಲಿ ಉತ್ತರಾಖಂಡದ ವಿಶ್ವಪ್ರಸಿದ್ಧ ಕೇದಾರನಾಥ ಮತ್ತು ಯಮುನೋತ್ರಿ ಧಾಮದ ದ್ವಾರಗಳನ್ನು ಇಂದಿನಿಂದ ಭಕ್ತರಿಗಾಗಿ ಬಂದ್ ಮಾಡಲಾಗಿದೆ. ಕೇದಾರನಾಥ ದೇವಾಲಯದ ದ್ವಾರಗಳನ್ನು ಇಂದು ಬೆಳಗ್ಗೆ ೮:೩೦ ಕ್ಕೆ ವೇದ ಮಂತ್ರಗಳು ಮತ್ತು ಧಾರ್ಮಿಕ ವಿಧಿ-ವಿಧಾನಗಳೊಂದಿಗೆ ಮುಚ್ಚಲಾಯಿತು. ದ್ವಾರಗಳನ್ನು ಮುಚ್ಚಿದ ನಂತರ, ಬಾಬಾ ಕೇದಾರರ ಪಂಚಮುಖಿ ಉತ್ಸವ ವಿಗ್ರಹವನ್ನು ಉಖಿಮಠದಲ್ಲಿರುವ ಓಂಕಾರೇಶ್ವರ ದೇವಸ್ಥಾನದಲ್ಲಿ ಇಡಲಾಗುತ್ತದೆ. ಉತ್ತರಕಾಶಿಯಲ್ಲಿರುವ ಯಮುನೋತ್ರಿ ಧಾಮದ ಬಾಗಿಲುಗಳನ್ನು ಮಧ್ಯಾಹ್ನ ೧೨:೩೦ಕ್ಕೆ ಮುಚ್ಚಲಾಯಿತು. ದ್ವಾರಗಳನ್ನು ಮುಚ್ಚಿದ ನಂತರ, ಯಮುನಾ ದೇವಿಯ ವಿಗ್ರಹವನ್ನು ಖರ್ಸಾಲಿಯಲ್ಲಿರುವ ದೇಗುಲದಲ್ಲಿ ಇಡಲಾಗುತ್ತದೆ. ಈ ವರ್ಷ, ೧೭.೪೫ ಲಕ್ಷಕ್ಕೂ ಹೆಚ್ಚು ಭಕ್ತರು ಕೇದಾರನಾಥ ಧಾಮಕ್ಕೆ ಭೇಟಿ ನೀಡಿದ್ದಾರೆ. ಇದೇ ವೇಳೆ ೬ ಲಕ್ಷದ ೪೪ ಸಾವಿರಕ್ಕೂ ಹೆಚ್ಚು ಭಕ್ತರು ಯಮುನೋತ್ರಿ ಧಾಮಕ್ಕೆ ಭೇಟಿ ನೀಡಿದ್ದಾರೆ.

**********

ಪಂಜಾಬ್ ನ್ಯಾಷನಲ್ ಬ್ಯಾಂಕ್‌ನಲ್ಲಿ ೧೩ ಸಾವಿರದ ೫೦೦ ಕೋಟಿ ರೂಪಾಯಿ ವಂಚನೆ ಪ್ರಕರಣಕ್ಕೆ ಸಂಬಂಧಿಸಿದಂತೆ ಪರಾರಿಯಾಗಿರುವ ಉದ್ಯಮಿ ಮೆಹುಲ್ ಚೋಕ್ಸಿಯನ್ನು ಭಾರತಕ್ಕೆ ಹಸ್ತಾಂತರಿಸಲು ಬೆಲ್ಜಿಯಂ ನ್ಯಾಯಾಲಯ ಅನುಮೋದನೆ ನೀಡಿದೆ. ಬಂಧನಕ್ಕೆ ಸಂಬಂಧಿಸಿದಂತೆ ಬೆಲ್ಜಿಯಂ ಅಧಿಕಾರಿಗಳು ಕಾನೂನುಬದ್ಧತೆಯನ್ನು ನ್ಯಾಯಾಲಯ ಎತ್ತಿಹಿಡಿದಿದ್ದು, ತಲೆಮರೆಸಿಕೊಂಡಿರುವ ಆಭರಣ ವ್ಯಾಪಾರಿಯನ್ನು ಹುಡುಕುವಲ್ಲಿ ಭಾರತ, ಪ್ರಮುಖ ಪ್ರಗತಿಯನ್ನು ದಾಖಲಿಸಿದೆ. ಆಂಟಿಗುವಾದಿಂದ ತಮ್ಮನ್ನು ಅಪಹರಿಸಲಾಗಿದೆ ಹಾಗೂ ಭಾರತದಲ್ಲಿ ರಾಜಕೀಯ ಕಿರುಕುಳ ಮತ್ತು ಅಮಾನವೀಯ ವರ್ತನೆಯ ಬೆದರಿಕೆಯನ್ನು ಎದುರಿಸಲಾಗಿದೆ ಎಂದು ಚೋಕ್ಸಿ ಪರ ವಕೀಲರು ನ್ಯಾಯಾಲಯದಲ್ಲಿ ವಾದಿಸಿದ್ದರು. ಆದರೆ ಈ ಆರೋಪಗಳನ್ನು ಬೆಂಬಲಿಸಲು ಯಾವುದೇ ದೃಢವಾದ ಪುರಾವೆಗಳು ಇಲ್ಲದ ಕಾರಣ ನ್ಯಾಯಾಲಯ ವಾದವನ್ನು ತಳ್ಳಿಹಾಕಿತು.

**********

ಅಹಮದಾಬಾದ್‌ನಲ್ಲಿರುವ ಇಸ್ರೋ ಐಟಿ ಸರ್ವರ್ ಕಟ್ಟಡದಲ್ಲಿ ಬೆಂಕಿ ಅವಘಡ ಸಂಭವಿಸಿದೆ. ಘಟನೆಯಲ್ಲಿ ಯಾವುದೇ ಪ್ರಾಣಹಾನಿ ಸಂಭವಿಸಿದ ವರದಿಯಾಗಿಲ್ಲ. ಕಟ್ಟಡದ ಮೇಲಿನ ಮಹಡಿಯಲ್ಲಿ ಬೆಂಕಿ ಕಾಣಿಸಿಕೊಳ್ಳುತ್ತಿದ್ದಂತೆಯೇ ಅಗ್ನಿಶಾಮಕ ಸಿಬ್ಬಂದಿ ತ್ವರಿತ ಕಾರ್ಯಾಚರಣೆ ನಡೆಸಿ, ಪರಿಸ್ಥಿತಿ ನಿಯಂತ್ರಣಕ್ಕೆ ತರುವಲ್ಲಿ ಯಶಸ್ವಿಯಾಗಿದ್ದಾರೆ. ಮುನ್ನೆಚ್ಚರಿಕಾ ಕ್ರಮವಾಗಿ ಕಟ್ಟಡದಲ್ಲಿ ಕೆಲಸ ನಿರತ ಸಿಬ್ಬಂದಿಯನ್ನು ಸುರಕ್ಷಿತವಾಗಿ ಸ್ಥಳಾಂತರಿಸಲಾಗಿದೆ.

**********

ಅಸ್ಸಾಂನ ಕೊಕ್ರಝಾರ್ ಜಿಲ್ಲೆಯ ಈಶಾನ್ಯ ಗಡಿನಾಡು ರೈಲ್ವೆಯ ಅಲಿಪುರ್ದೂರ್ ವಿಭಾಗದಲ್ಲಿ ಕೊಕ್ರಝಾರ್ ಮತ್ತು ಸಲಕತಿ ನಿಲ್ದಾಣಗಳ ನಡುವಿನ ರೈಲ್ವೆ ಹಳಿಯ ಒಂದು ಭಾಗದಲ್ಲಿ ಇಂದು ಬೆಳಗಿನ ಜಾವ ಸಂಭವಿಸಿದ ಶಂಕಿತ ಸ್ಫೋಟದಿಂದ ರೈಲ್ವೆ ಹಳಿಗೆ ಹಾನಿಯಾಗಿದೆ. ಇದರಿಂದಾಗಿ ರೈಲು ಸೇವೆಗಳು ವ್ಯತ್ಯಯಗೊಂಡಿವೆ. ರೈಲ್ವೆ ಅಧಿಕಾರಿಗಳ ಪ್ರಕಾರ, ಮಾರ್ಗದಲ್ಲಿ ಸರಕು ರೈಲು ಹಾದುಹೋಗುವಾಗ ಸ್ಫೋಟಕ ಸಾಧನದಿಂದ ಸ್ಫೋಟ ಸಂಭವಿಸಿರಬಹುದು ಎಂದು ಶಂಕಿಸಲಾಗಿದೆ. ಈ ಬಗ್ಗೆ ಅಸ್ಸಾಂ ಪೊಲೀಸರು, ರೈಲ್ವೆ ರಕ್ಷಣಾ ಪಡೆ ಮತ್ತು ಗುಪ್ತಚರ ಅಧಿಕಾರಿಗಳು ತನಿಖೆ ನಡೆಸುತ್ತಿದ್ದಾರೆ. ಯುದ್ಧೋಪಾದಿಯಲ್ಲಿ ಹಳಿಯನ್ನು ಸಂಪೂರ್ಣವಾಗಿ ದುರಸ್ತಿ ಮಾಡಲಾಗಿದ್ದು, ನಂತರ ಸಾಮಾನ್ಯ ರೈಲು ಕಾರ್ಯಾಚರಣೆಗಳು ಪುನರಾರಂಭಗೊಳಿಸಲಾಗಿದೆ. ಈ ವಿಭಾಗದಲ್ಲಿ ಗಸ್ತು ತಿರುಗುವಿಕೆ ತೀವ್ರಗೊಳಿಸಲಾಗಿದೆ ಎಂದು ರೈಲ್ವೆ ಅಧಿಕಾರಿಗಳು ತಿಳಿಸಿದ್ದಾರೆ.

**********

ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್, ದೇಶದ ಕಾರ್ಯತಂತ್ರದ ಪರಮಾಣು ಪಡೆಗಳ ಕವಾಯತುಗಳನ್ನು ಮೇಲ್ವಿಚಾರಣೆ ಮಾಡಿದರು. ಈ ವೇಳೆ ಉನ್ನತ ಮಟ್ಟದ ಮಿಲಿಟರಿ ಅಧಿಕಾರಿಗಳನ್ನು ಉದ್ದೇಶಿಸಿ ವರ್ಚುಯಲ್ ಮೂಲಕ ಮಾತನಾಡಿದ ಅವರು, ಪ್ರಸ್ತುತ ಕವಾಯತುಗಳು ಭೂಮಿ, ಸಮುದ್ರ ಮತ್ತು ವಾಯು-ಆಧಾರಿತ ಕಾರ್ಯತಂತ್ರದ ಪರಮಾಣು ಪಡೆಗಳನ್ನು ಒಳಗೊಂಡಿವೆ ಎಂದು ಹೇಳಿದರು. ಕವಾಯತು ಸಮಯದಲ್ಲಿ ಖಂಡಾಂತರ ಬ್ಯಾಲಿಸ್ಟಿಕ್ ಕ್ಷಿಪಣಿಗಳು ಮತ್ತು ವಾಯು-ಆಧಾರಿತ ಕ್ರೂಸ್ ಕ್ಷಿಪಣಿಗಳ ಪ್ರಾಯೋಗಿಕ ಉಡಾವಣೆಗಳನ್ನು ನಡೆಸಲಾಯಿತು. ಈ ಕವಾಯತು ರಷ್ಯಾ ಅಧ್ಯಕ್ಷ ಪುಟಿನ್ ಅವರ ಮೇಲ್ವಿಚಾರಣೆಯಲ್ಲಿ ನಡೆಯಿತು. ಇದೇ ವೇಳೆ ಮಿಲಿಟರಿ ಕಮಾಂಡ್ ಮತ್ತು ನಿಯಂತ್ರಣ ವ್ಯವಸ್ಥೆಗಳ ಸಿದ್ಧತೆ ಮತ್ತು ಸಿಬ್ಬಂದಿಯ ಕಾರ್ಯಾಚರಣೆಯ ಕೌಶಲ್ಯಗಳನ್ನು ರಷ್ಯಾ ಅಧ್ಯಕ್ಷರು ಪರಿಶೀಲಿಸಿದರು ಎಂದು ಕ್ರೆಮ್ಲಿನ್ ತಿಳಿಸಿದೆ.

**********

ಆಸ್ಟ್ರೇಲಿಯಾದ ಅಡಿಲೇಡ್‌ನಲ್ಲಿ ಇಂದು ನಡೆಯುತ್ತಿರುವ ಮೂರು ಪಂದ್ಯಗಳ ಏಕದಿನ ಕ್ರಿಕೆಟ್ ಸರಣಿಯ ಎರಡನೇ ಪಂದ್ಯದಲ್ಲಿ ಭಾರತ ಮತ್ತು ಆತಿಥೇಯ ಆಸ್ಟ್ರೇಲಿಯಾ ತಂಡ ಮುಖಾಮುಖಿಯಾಗಿವೆ. ಟಾಸ್ ಸೋತು ಮೊದಲು ಬ್ಯಾಟಿಂಗ್ ಮಾಡಿದ ಭಾರತ, ನಿಗದಿತ ೫೦ ಓವರ್‌ಗಳಲ್ಲಿ ೯ ವಿಕೆಟ್ ನಷ್ಟಕ್ಕೆ ೨೬೪ ರನ್ ಮಾಡಿದೆ. ಈ ಮೂಲಕ ಆಸ್ಟ್ರೇಲಿಯಾ ತಂಡಕ್ಕೆ ೨೬೫ ರನ್‌ಗಳ ಗೆಲುವಿನ ಗುರಿ ನೀಡಿದೆ.

**********

ನವಿ ಮುಂಬೈನಲ್ಲಿ ಡಾ. ಡಿ.ವೈ.ಪಾಟೀಲ್ ಸ್ಪೋರ್ಟ್ಸ್ ಅಕಾಡೆಮಿಯಲ್ಲಿ ಇಂದು ನಡೆಯಲಿರುವ ಐಸಿಸಿ ಮಹಿಳಾ ವಿಶ್ವಕಪ್ ಕ್ರಿಕೆಟ್ ಪಂದ್ಯದಲ್ಲಿ ಭಾರತ ವನಿತೆಯರ ತಂಡ, ನ್ಯೂಜಿಲೆಂಡ್ ತಂಡವನ್ನು ಎದುರಿಸಲಿದೆ. ಪಂದ್ಯ ಮಧ್ಯಾಹ್ನ ೩ ಗಂಟೆಗೆ ಆರಂಭವಾಗಲಿದೆ. ಸತತ ಸೋಲುಗಳಿಂದ ಕಂಗೆಟ್ಟಿರುವ ಭಾರತ ತಂಡಕ್ಕೆ ಸೆಮಿಫೈನಲ್ ಪ್ರವೇಶಿಸಲು ಇದು ಮಾಡು ಇಲ್ಲವೆ, ಮಡಿ ಪಂದ್ಯವಾಗಿದೆ.

*****END*****